5247(6017) ಶ್ರೀ ಗೋಪಾಲ ಪೂಜಾರಿ .ಕೆ (ಬೈಂದೂರು) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೈಂದೂರು ಮತಕ್ಷೇತ್ರದ ಮರವಂತೆ ಕ್ರಾಸಿ ಕಡಲ ತೀರದಲ್ಲಿ ಮಳೆಗಾಲದಲ್ಲಿ ಉಂಟಾಗುವ ತೀರದ ಕಡಲ ಕೊರೆತವನ್ನು ಕೇಂದ್ರ ಸರ್ಕಾರದ ರಸ್ತೆ ಮತ್ತು ಭೂಸಾರಿಗೆ ಇಲಾಖೆಯ ಅಧಿಕಾರಿಗಳು ಪರಿಶೀಲಿಸಿದ್ದು ನಿಜವಲ್ಲವೇ;

ಆ) ಹಾಗಿದ್ದಲ್ಲಿ ಕಡಲ್ಕೊರೆತ ತಡೆಗಟ್ಟಿ ರಾಷ್ಟ್ರೀಯ ಹೆದ್ದಾರಿಯನ್ನು ಸಂರಕ್ಷಿಸಲು ಸರ್ಕಾರ ಏನಾದರೂ ಕಾರ್ಯಕ್ರಮ ರೂಪಿಸಿದೆಯೇ;

ಇ) ರೂಪಿಸಿದ್ದಲ್ಲಿ ಅದು ಯಾವ ಹಂತದಲ್ಲಿದೆ.

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ರಾಷ್ಟ್ರೀಯ ಹೆದ್ದಾರಿ–17 ರ ಬದಿ ಮರವಂತೆ ಕಡಲ ನೀರದ ಕೊರೆತವನ್ನು ಕೇಂದ್ರ ಸರ್ಕಾರದ ರಸ್ತೆ ಮತ್ತು ಭೂಸಾರಿಗೆ ಇಲಾಖೆಯ ಅಧೀಕ್ಷಕ ಅಭಿಯಂತರರು, ನವದೆಹಲಿ ಹಾಗೂ ಪ್ರಾದೇಶಿಕ ಅಧಿಕಾರಿ, ಬೆಂಗಳುರು ಇವರು ಪರಿಶೀಲಿಸಿರುತ್ತಾರೆ.

ಆ) ಹೌದು

ಇ) ಕೇಂದ್ರ ಭೂ ಸಾರಿಗೆ ಸಚಿವಾಲಯದಿಂದ ಮತವಂತೆ ತಡೆಗೋಡೆ ನಿರ್ಮಾಣಕ್ಕೆ ರೂ. 270.00 ಲಕ್ಷಗಳ ಅಂದಾಜು ಮಂಜೂರಾಗಿದ್ದು ಕೆಲಸ ನಿರ್ವಹಣೆಗೆ ಗುತ್ತಿಗೆದಾರರಿಗೆ ಕಾರ್ಯದೇಶ ನೀಡಲಾಗಿದೆ. ಮಳೆಗಾಲ ಇರುವುದರಿಂದ ತುರ್ತು ಕ್ರಮವಾಗಿ ತಾತ್ಕಾಲಿಕ ತಡೆಗೋಡೆ ಒದಗಿಸಲಾಗಿದೆ. ಮಳೆಗಾಲದ ನಂತರ ಶಾಶ್ವತ ತಡೆಗೋಡೆ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

5248(6018) ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಕೊಲ್ಲೂರು ಶ್ರೀ ಮೂಕಾಂಬಿಕಾ ದೇವಸ್ಥಾನ, (ಕೊಲ್ಲೂರು) ಅಧೀನ ಸಂಸ್ಥೆಗಳಲ್ಲಿ 2000ನೇ ವರ್ಷದಿಂದೀಚೆಗೆ ಎಷ್ಟು ಹುದ್ದೆಗಳನ್ನು ವ್ಯಜಿಸಲಾಗಿದೆ;

ಆ) ಅವುಗಳಲ್ಲಿ ಎಷ್ಟು ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಾಗಿದೆ;

ಇ) ಇವುಗಳಿಗೆ ನಿಯಮಾನುಸಾರ ಮೀಸಲಾತಿಯನ್ನು ಪಾಲಿಸಲಾಗಿದೆಯೇ;

ಈ) ಹಾಗಿದ್ದಲ್ಲಿ, ಸರ್ಕಾರ ಇದರ ಬಗ್ಗೆ ಕೈಗೊಳ್ಳುವ ಕ್ರಮವೇನು?

ಶ್ರೀ ಎಂ.ಪಿ.ಪ್ರಕಾಶ್ (ಕಂದಾಯ ಸಚಿವರು) :

ಅ) 33 ಹುದ್ದೆಗಳನ್ನು ಸೃಷ್ಟಿಸಲಾಗಿದೆ.

ಆ) ಸೃಷ್ಟಿಸಲಾದ ಎಲ್ಲಾ 33 ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಾಗಿದೆ.

ಇ) ದೇವಾಲಯ ವತಿಯಿಂದ ನಿರ್ವಹಿಸಲಾಗುತ್ತಿರುವ ಅಧೀನ ಸಂಸ್ಥೆಗಳಲ್ಲಿ, ಒಂದು ಸಂಸ್ಥೆ ಮಾತ್ರ ಅನುದಾನಿತವಾಗಿದ್ದು, ಉಳಿದ 5 ಅನುದಾನ ರಹಿತ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿರುತ್ತವೆ.

ಸದರಿ ಸಂಸ್ಥೆಗಳ ಸಿಬ್ಬಂದಿಗಳಲ್ಲಿ ಹಿಂದುಳಿದ ವರ್ಗ–2(ಎ), ಎಸ್.ಸಿ ಮತ್ತು ಎಸ್.ಟಿ ಅಭ್ಯರ್ಥಿಗಳನ್ನು ಕೆಳಕಂಡಂತೆ ನೇಮಕಗೊಳಿಸಲಾಗಿದೆ:–

1. ಎಸ್.ಟಿ. 2
2. ಎಸ್.ಸಿ 2
3. ಹಿಂದುಳಿದ ವರ್ಗ2(ಎ) 4

ಈ) ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ಮತ್ತು ನಿಯಮ 2002 ದಿ:01/05/2003 ರಿಂದ ಜಾರಿಗೆ ಬಂದಿದ್ದು, ಸದರಿ ಶಾಸನದಲ್ಲಿ ನೇಮಕಾತಿ ಸೆಕ್ಷನ್ 9 ರಿಂದ 16 ರವರೆಗೆ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ತಡೆಯಾಜ್ಞೆ ಇರುವುದರಿಂದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಹ ಶಿಕ್ಷಕರನ್ನು 6 ತಿಂಗಳು, 9 ತಿಂಗಳು ಮತ್ತು ಶೈಕ್ಷಣಿಕ ವರ್ಷದ ಅವಧಿಗೆ ಸಂಚಿತ ಸಂಭಾವನೆ ಮೇರೆಗೆ ಕಾರ್ಯನಿರ್ವಹಿಸಿಕೊಳ್ಳಲು ಅನುಮತಿ ನೀಡಿದೆ.

ತಡೆಯಾಜ್ಞೆ ತೆರವಾದ ನಂತರ ನಿಯಮಾನುಸಾರ ಮೀಸಲಾತಿಯನ್ನು ಒಳಗೊಂಡಂತೆ ಎಲ್ಲಾ ಹುದ್ದೆಗಳಿಗೆ ನೇಮಕಾತಿ ಕ್ರಮ ಕೈಗೊಳ್ಳಲಾಗುವುದು.

5249(6019) ಶ್ರೀ ಗೋಪಾಲ ಪೂಜಾರಿ ಕೆ. (ಹುಬ್ಬಳ್ಳಿ ಗ್ರಾಮೀಣ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೈಂದೂರು ವಿಧಾನ ಸಭಾ ಕ್ಷೇತ್ರದಲ್ಲಿ ಮೆಸ್ಕಾಂ 172 ಉಪ ಗ್ರಾಮ ವಿದ್ಯುದೀಕರಣ ಯೋಜನೆ ಮಂಜೂರು ಮಾಡಿದ್ದು ಅವುಗಳಲ್ಲಿ ಅನುಷ್ಠಾನಗೊಂಡಿರುವ ಯೋಜನೆಗಳು ಎಷ್ಟು;

ಆ) ಹಾಗಿದ್ದಲ್ಲಿ ಉಳಿದ ಯೋಜನೆಗಳನ್ನು ಅನುಷ್ಠಾನಗೊಳಿಸುವುದು ಯಾವಾಗ ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ಮತ್ತು ಆ) ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯು ಬೈಂದೂರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 172 ಉಪಗ್ರಾಮಗಳನ್ನು ಗುರುತಿಸಿ ವಿದ್ಯುದೀಕರಣಗೊಳಿಸಲು ಬಡ್ಡಿರಹಿತ ಸಾಲ ಸೌಲಭ್ಯಕ್ಕಾಗಿ ಪಿ.ಡಿ.ಬಿ. ಯೋಜನೆಯಡಿಯಲ್ಲಿ ಗ್ರಾಮೀಣ ವಿದ್ಯುದ್ದೀಕರಣ ನಿಗಮಕ್ಕೆ (ಆರ್.ಇ.ಸಿ) ಪ್ರಸ್ತಾವನೆಯನ್ನು ಸಲ್ಲಿಸಿ, ವಿದ್ಯುದ್ದೀಕರಣಕ್ಕಾಗಿ ಟೆಂಡರ್ ಪ್ರಕ್ರಿಯೆ ಆರಂಭಿಸಲಾಗಿತ್ತು. ಸಾಲ ಸೌಲಭ್ಯವನ್ನು ಪಡೆಯಲು ಅನುಸರಿಸಬೇಕಾದ ನಿಬಂಧನೆಗಳನ್ನು ಪಾಲಿಸಲು ಇಂಧನ ಇಲಾಖೆಯು, ಗ್ರಾಮೀಣ ವಿದ್ಯುದೀಕರಣ ನಿಗಮಕ್ಕೆ ಹೆಚ್ಚುವರಿ ಕಾಲಾವಕಾಶವನ್ನು ಕೋರಿ ಮನವಿಯನ್ನು ಸಲ್ಲಿಸಿತ್ತು. ಆದರೆ ಗ್ರಾಮೀಣ ವಿದ್ಯುದ್ದೀಕರಣ ನಿಗಮವು ಬಡ್ಡಿ ರಹಿತ ಸಾಲ ಸೌಲಭ್ಯವನ್ನು ಹಿಂದಕ್ಕೆ ಪಡೆದುದರಿಂದ ಟೆಂಡರ್ ಪ್ರಕ್ರಿಯೆಯನ್ನು ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯು ರದ್ದುಪಡಿಸಬೇಕಾಯಿತು. ಆದುದರಿಂದ ಮೇಲ್ಕಂಡ 172 ಉಪಗ್ರಾಮಗಳಲ್ಲಿ ಯಾವ ಉಪಗ್ರಾಮವೂ ವಿದ್ಯುದೀಕರಣಗೊಳ್ಳಲಿಲ್ಲ.

ಪುನಃ ಬಡ್ಡಿ ಸಹಿತ ಸಾಲ ಸೌಲಭ್ಯದ ಪ್ರಸ್ತಾವನೆಯನ್ನು ಗ್ರಾಮೀಣ ವಿದ್ಯುದೀಕರಣ ನಿಗಮಕ್ಕೆ ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯು 29–01–2005ರಲ್ಲಿ ಸಲ್ಲಿಸಿತು. ಈ ಮಧ್ಯೆ, ಕೇಂದ್ರ ಸರಕಾರವು ರಾಜೀವ್ ಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯನ್ನು